ಕರ್ನಾಟಕ ಸರ್ಕಾರ

ಜಿಲ್ಲಾ ಪಂಚಾಯತ, ಬಾಗಲಕೋಟೆ

ದೂರವಾಣಿ ಸಂಖ್ಯೆ:08354-235576/235604/235608 **Mail Id:ceo.zp.karbgk@nic.in** ಫ್ಯಾಕ್ಸ್:08354-235562

ಸಂಖ್ಯೆ:ಜಿಪಂಬಾ/ಸಿಬ್ಬಂದಿ/ಗ್ರಂಥಾಲಯ/ಸಿಆರ್-126/2022-23 ದಿನಾಂಕ:21-09-2023

# "ಅಧಿಸೂಚನೆ"

**ವಿಷಯ:** ಬಾಗಲಕೋಟೆ ಜಿಲ್ಲೆ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಗ್ರಾಮ ಪಂಚಾಯತ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಹುದ್ದೆಗಳಿಗೆ ನೇಮಕಾತಿ ಮಾಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಅಧಿಸೂಚನೆ ಸಂಖ್ಯೆ: RDPR/156/GPA/2022(ಇ) ದಿನಾಂಕ:14-11-2022.

********

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಸೇವಾ)ನಿಯಮಗಳು, 2022ರ ನಿಯಮಗಳನ್ವಯ ಬಾಗಲಕೋಟೆ ಜಿಲ್ಲಾ ಪಂಚಾಯತ್ ವ್ಯಾಪ್ತಿಯ 09 ತಾಲ್ಲೂಕುಗಳ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಈ ಕೆಳಗಿನ ಹುದ್ದೆಗಳನ್ನು ಭರ್ತಿಮಾಡಲು ಅರ್ಹ ಅಭ್ಯರ್ಥಿಗಳಿಂದ On-line ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

## 1. ಗ್ರಾಮ ಪಂಚಾಯತಿಗಳಲ್ಲಿ ಖಾಲಿ ಇರುವ ಹುದ್ದೆಗಳ ವಿವರಗಳು

| ಕ್ರ.ಸಂ | ಹುದ್ದೆಗಳ ಹೆಸರು | ಖಾಲಿ ಇರುವ ಹುದ್ದೆಗಳ ಸಂಖ್ಯೆ |
|---|---|---|
| 1 | ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ | 23 |
| | ಒಟ್ಟು | 23 |

## 2. ಹುದ್ದೆಗಳ ವರ್ಗೀಕರಣ

"ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ"

| ಕ್ರ. ಸಂ. | ಮೀಸಲಾತಿ | ಸಾಮಾನ್ಯ ಅಭ್ಯರ್ಥಿ (ಸಾ.ಅ) | ಗ್ರಾಮೀಣ ಅಭ್ಯರ್ಥಿ (ಗ್ರಾ.ಅ) | ಮಹಿಳಾ ಅಭ್ಯರ್ಥಿ (ಮ.ಅ) | ಕನ್ನಡ ಮಾಧ್ಯಮ ಅಭ್ಯರ್ಥಿ (ಕಮಾಅ) | ಯೋಜನಾ ನಿರಾಶ್ರಿತ ಅಭ್ಯರ್ಥಿ (ಯೋ.ಅ) | ಮಾಜಿಸೈನಿಕ (ಮಾ.ಸೈ) | ಅಂಗವಿಕಲ ಅಭ್ಯರ್ಥಿ (ಅಂ.ವಿ) | ತೃ.ಲಿಂ | ಒಟ್ಟು ಹುದ್ದೆಗಳು |
|---|---|---|---|---|---|---|---|---|---|---|
| 1 | ಪ.ಜಾ | 01 | 01 | 01 | - | - | - | 01 | - | 04 |
| 2 | ಸಾಮಾನ್ಯ | 02 | 02 | 04 | - | - | 01 | 01 | - | 10 |
| 3 | ಪ.ಪಂ. | 01 | - | 01 | - | - | - | - | - | 02 |
| 4 | ಪ್ರವರ್ಗ-I | 01 | - | - | - | - | - | - | - | 01 |
| 5 | -IIಎ | 01 | 01 | 01 | - | - | - | - | - | 03 |
| 6 | -IIಬಿ | 01 | - | - | - | - | - | - | - | 01 |
| 7 | -IIIಎ | 01 | - | - | - | - | - | - | - | 01 |
| 8 | -IIIಬಿ | 01 | - | - | - | - | - | - | - | 01 |
| | ಒಟ್ಟು | 09 | 04 | 07 | - | - | 01 | 02 | - | 23 |

3. ಗ್ರಾಮ ಪಂಚಾಯತ್ ವಾರು ಖಾಲಿ ಇರುವ ಹುದ್ದೆಗಳು ಮತ್ತು ಅವುಗಳ ಮೀಸಲಾತಿ ವಿವರ

ಈ ಕೆಳಕಂಡ ಹುದ್ದೆಗಳು ಯಾವ ಗ್ರಾಮ ಪಂಚಾಯತಿನಲ್ಲಿ ಖಾಲಿ ಇದೆಯೋ, ಆ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ವಾಸಿಸುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಈ ಬಗ್ಗೆ ಸಂಬಂಧಪಟ್ಟ ತಹಶೀಲ್ದಾರರಿಂದ ಪಡೆದ ವಾಸಸ್ಥಳ ದೃಢೀಕರಣ ಪತ್ರವನ್ನು (ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿರುವ) ಅಪ್ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ.

"ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ"

| ಕ್ರ.ಸಂ. | ತಾಲ್ಲೂಕು | ಗ್ರಾ.ಪಂ. ಹೆಸರು | ಮೀಸಲಾತಿ ವಿವರ |
|---|---|---|---|
| 1. | ಬಾದಾಮಿ | ಆಲೂರ ಎಸ್.ಕೆ. | ಸಾಮಾನ್ಯ |
| 2. | ಬಾದಾಮಿ | ಕೈನಕಟ್ಟಿ | ಪ.ಪಂ. |
| 3. | ಬಾದಾಮಿ | ಹಾಲಿಗೇರಿ | ಪ್ರವರ್ಗ-III ಎ |
| 4. | ಬಾಗಲಕೋಟೆ | ದೇವನಾಳ | ಸಾ.ಅ. (ಅಂ.ವಿ) |
| 5. | ಬಾಗಲಕೋಟೆ | ಸೀಮಿಕೇರಿ | ಸಾಮಾನ್ಯ |
| 6. | ಬೀಳಗಿ | ಜಾನಮಟ್ಟಿ | ಸಾಮಾನ್ಯ (ಗ್ರಾ.ಅ) |
| 7. | ಬೀಳಗಿ | ಬೂದಿಹಾಳ ಎಸ್.ಎಚ್. | ಪ್ರ.ವರ್ಗ-II(ಬಿ) |
| 8. | ಇಲಕಲ್ಲ | ಕೆಲೂರ | ಸಾ.ಅ. (ಮ.ಅ) |
| 9. | ಗುಳೇದಗುಡ್ಡ | ಹಾನಾಪೂರ ಎಸ್.ಪಿ. | ಸಾಮಾನ್ಯ (ಮ.ಅ.) |
| 10. | ಗುಳೇದಗುಡ್ಡ | ಮಂಗಳಗುಡ್ಡ | ಸಾ.ಅ. (ಗ್ರಾ.ಅ) |
| 11. | ಹುನಗುಂದ | ಹಿರೇಮಳಗಾವಿ | ಪ್ರವರ್ಗ-III ಬಿ |
| 12. | ಹುನಗುಂದ | ಹೂವಿನಹಳ್ಳಿ | ಸಾ.ಅ. (ಮಾ.ಸೈ) |
| 13. | ಹುನಗುಂದ | ಹಾವರಗಿ | ಪ.ಪಂ. (ಮ.ಅ) |
| 14. | ಹುನಗುಂದ | ಬಿಸಲದಿನ್ನಿ | ಸಾ.ಅ. (ಮ.ಅ) |
| 15. | ಜಮಖಂಡಿ | ಅಡಿಹುಡಿ | ಪ.ಜಾ. |
| 16. | ಜಮಖಂಡಿ | ಖಾಜಿಬೀಳಗಿ | ಸಾ.ಅ. (ಮ.ಅ) |
| 17. | ಜಮಖಂಡಿ | ಮರೇಗುದ್ದಿ | ಪ್ರ.ವರ್ಗ-II(ಎ) (ಮ.ಅ) |
| 18. | ಮುಧೋಳ | ಗುಲಗಾಲ ಜಂಬಗಿ | ಪ್ರ.ವರ್ಗ- I |
| 19. | ಮುಧೋಳ | ಸೋರಗಾವಿ | ಪ.ಜಾ.(ಗ್ರಾ.ಅ) |
| 20. | ರಬಕವಿ-ಬನಹಟ್ಟಿ | ಮದಭಾವಿ | ಪ.ಜಾ.(ಅಂ.ವಿ) |
| 21. | ರಬಕವಿ-ಬನಹಟ್ಟಿ | ನಂದಗಾಂವ | ಪ.ಜಾ. (ಮ.ಅ) |
| 22. | ರಬಕವಿ-ಬನಹಟ್ಟಿ | ತಮದಡ್ಡಿ | ಪ್ರ.ವರ್ಗ-II(ಎ) |
| 23. | ರಬಕವಿ-ಬನಹಟ್ಟಿ | ಹಿಪ್ಪರಗಿ | ಪ್ರ.ವರ್ಗ-II(ಎ)(ಗ್ರಾ.ಅ) |

4) ವೇತನ : ಗ್ರಾಮ ಪಂಚಾಯತ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರು ಸರ್ಕಾರವು ಕಾಲಕಾಲಕ್ಕೆ ನಗದಿಪಡಿಸುವ ಗೌರವ ಸಂಭಾವನೆಗೆ ಅರ್ಹರಾಗಿರತಕ್ಕದ್ದು.

5) **ಅರ್ಜಿಸಲ್ಲಿಸುವ ದಿನಾಂಕ**

ಎ) ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕದಿನಾಂಕ : 26-09-2023

ಬಿ) ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 19-10-2023

6) **ಅರ್ಜಿ ಶುಲ್ಕ**

| | |
|---|---|
| ಸಾಮಾನ್ಯ ಅರ್ಹತೆ ಅಭ್ಯರ್ಥಿಗಳಿಗೆ | ರೂ. 500 |
| ಪ್ರವರ್ಗ2(ಎ), 2(ಬಿ), 3(ಎ), 3(ಬಿ) ಗೆಸೇರಿದಅಭ್ಯರ್ಥಿಗಳಿಗೆ | ರೂ. 300 |
| ಪರಿಶಿಷ್ಟಜಾತಿ, ಪರಿಶಿಷ್ಟಪಂಗಡ, ಪ್ರವರ್ಗ-1 , ಮಾಜಿಸೈನಿಕಅಭ್ಯರ್ಥಿಗಳಿಗೆ | ರೂ. 200 |
| ವಿಶೇಷ ಚೇತನ ಅಭ್ಯರ್ಥಿಗಳಿಗೆ | ರೂ. 100 |

7) **ಶುಲ್ಕ ಪಾವತಿಸುವ ವಿಧಾನ**

ಶುಲ್ಕ ಪಾವತಿಸಿದ ಬಗ್ಗೆ ಶುಲ್ಕ ಪಾವತಿ ಮಾಡಿ (Print Optionನಲ್ಲಿ) ಚಲನ್ ಪ್ರಿಂಟ್ ತೆಗೆದುಕೊಂಡು, ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಅಪ್ಲೋಡ್ ಮಾಡುವುದು

| ಕ್ರ.ಸಂ | ಖಾತೆದಾರರ ಹೆಸರು | ಬ್ಯಾಂಕ್ ಹೆಸರು | ಬ್ಯಾಂಕ್ ಶಾಖೆಯ ಹೆಸರು | ಖಾತೆನಂಬರ | IFSC CODE NO |
|---|---|---|---|---|---|
| 1 | Chief Executive Officer, Zilla Panchayat Bagalkote | State Bank Of India | Bagalkote | 11029261255 | SBIN0000812 |

1. ಬ್ಯಾಂಕಿನ ಹೆಸರು/Name of the Bank
2. ರಶೀದಿ ಸಂಖ್ಯೆ/Receipt Number
3. ರಶೀದಿ ದಿನಾಂಕ/Receipt Date
4. ಪಾವತಿಸಿದ ಮೊತ್ತ (ರೂಪಾಯಿಗಳಲ್ಲಿ)/Amount Paid (in Rupees)

ಬ್ಯಾಂಕ್ ಶುಲ್ಕವನ್ನು ಪಾವತಿಸದೇ ಹಾಗೂ ದಾಖಲೆಗಳನ್ನು /ಭಾವಚಿತ್ರ/ಸಹಿಯನ್ನು ಅಪ್ಲೋಡ ಮಾಡದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಅಭ್ಯರ್ಥಿಗಳು ನಿಗದಿಪಡಿಸಿದ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಯಾವುದೇ ಸಂದರ್ಭದಲ್ಲೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಇತರ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ, ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

8)

| | |
|---|---|
| **Online ಮೂಲಕ ಅರ್ಜಿ ಸಲ್ಲಿಸಲುವೆಬ್ ಸೈಟ್** | **https://bagalkot.nic.in/** |

## 9) ವಿವರವಾದ ಹಂತಗಳು

ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವ ಮೊದಲು ಅಧಿಸೂಚನೆಯಲ್ಲಿನೀಡಿರುವ ಅರ್ಜಿ ಭರ್ತಿ ಮಾಡುವ ಕುರಿತ ಸೂಚನೆಗಳು, ಅರ್ಹತಾ ಷರತ್ತುಗಳನ್ನುಓದಿಕೊಳ್ಳತಕ್ಕದ್ದು. ಈ ಕೆಳಗಿನ ಕೋಷ್ಟಕದಲ್ಲಿ ನೀಡಿರುವ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿಉಪಯೋಗಿಸಿದ ಪದಗಳಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು.

| | | | |
|---|---|---|---|
| ಸಾ.ಅ | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ | ಪರಿಶಿಷ್ಟ ಜಾತಿ | SC | Sheduled Caste |
| ಪ.ಪಂ | ಪರಿಶಿಷ್ಟ ಪಂಗಡ | ST | Sheduled Tribe |
| ಪ್ರ-1 | ಪ್ರವರ್ಗ-1 | Cat-1 | Category-1 |
| 2ಎ | ಪ್ರವರ್ಗ-2ಎ | 2A | Category-2A |
| 2ಬಿ | ಪ್ರವರ್ಗ-2ಬಿ | 2B | Category-2B |
| 3ಎ | ಪ್ರವರ್ಗ-3ಎ | 3A | Category-3A |
| 3ಬಿ | ಪ್ರವರ್ಗ-3ಬಿ | 3B | Category-3B |
| ಮಾ.ಸೈ | ಮಾಜಿ ಸೈನಿಕ | Ex.MP | Ex.Military Person |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಅಂ.ವಿ | ಅಂಗವಿಕಲ ಅಭ್ಯರ್ಥಿ | PH | Physically Handicapped |
| ಯೋ.ನಿ.ಅ | ಯೋಜನೆ ನಿರಾಶ್ರಿತ ಅಭ್ಯರ್ಥಿ | PDP | Project Displaced Person |
| ತೃ.ಲಿ | ತೃತೀಯ ಲಿಂಗ | TG | Transgender |

## 10) ಶೈಕ್ಷಣಿಕ ವಿದ್ಯಾರ್ಹತೆ:-

1. ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಈ ಕೆಳಗೆ ನಮೂದಿಸಿರುವ ಕೋಷ್ಟಕದಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಲೇಬೇಕು. ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದದೇ ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿದ್ದರೂ ಸಹ ಪರಿಗಣಿಸಲಾಗುವುದಿಲ್ಲ.

| ಕ್ರ.ಸಂ | ಹುದ್ದೆ | ವಿದ್ಯಾರ್ಹತೆ | ಆಯ್ಕೆ ವಿಧಾನ |
|---|---|---|---|
| 1 | "ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ" | 1. ದ್ವಿತೀಯ ಪದವಿ ಪೂರ್ವ ಪರೀಕ್ಷೆ (ಪಿ.ಯು.ಸಿ)ಯಲ್ಲಿ ಉತ್ತೀರ್ಣರಾಗಿರಬೇಕು.<br>2. ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ನಲ್ಲಿ ಪ್ರಮಾಣ ಪತ್ರ ಪಡೆದಿರತಕ್ಕದ್ದು ಹಾಗೂ<br>3. ಕನಿಷ್ಠ ಮೂರು ತಿಂಗಳ ಕಂಪ್ಯೂಟರ್ ಕೋರ್ಸ್ ನಲ್ಲಿ ಉತ್ತೀರ್ಣರಾಗಿರಬೇಕು. | ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಗಳಿಸಿದ ಗರಿಷ್ಠ ಅಂಕಗಳು/ಮೆರಿಟ್ ಆಧಾರದಲ್ಲಿ |

1) "ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ" ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆಯಾದ ದ್ವಿತೀಯ ಪದವಿ ಪೂರ್ವ ಪರೀಕ್ಷೆ (ಪಿ.ಯು.ಸಿ)ಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್‌ನಲ್ಲಿ ಪ್ರಮಾಣ ಪತ್ರ ಪಡೆದಿರತಕ್ಕದ್ದು ಹಾಗೂ ಕನಿಷ್ಠ ಮೂರು ತಿಂಗಳ ಕಂಪ್ಯೂಟರ್ ಕೋರ್ಸ್‌ನಲ್ಲಿ ಉತ್ತೀರ್ಣರಾಗಿರಬೇಕು.

- ವಿದ್ಯಾರ್ಹತೆಯ ದಾಖಲಾತಿಗಳ ನೈಜತೆ ಬಗ್ಗೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ದೃಢಪಡಿಸಿಕೊಂಡ ನಂತರ ನೇಮಕಾತಿಗೆ ಪರಿಗಣಿಸಲಾಗುವುದು.

3. ಗ್ರಾಮ ಪಂಚಾಯತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರದ ಮೇಲ್ವಿಚಾರಕ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸಂಬಂಧಪಟ್ಟ ಗ್ರಾಮ ಪಂಚಾಯತಿ ವ್ಯಾಪ್ತಿಯ ನಿವಾಸಿಯಾಗಿರತಕ್ಕದ್ದು. ಪರಂತು ಸಂಬಂಧಪಟ್ಟ ಗ್ರಾಮ ಪಂಚಾಯತಿಯ ವ್ಯಾಪ್ತಿಯ ನಿವಾಸಿಯ ಲಭ್ಯತೆ ಇಲ್ಲದೇ ಇದ್ದಲ್ಲಿ ಆಯಾ ತಾಲೂಕು ಪಂಚಾಯತಿಯ ವ್ಯಾಪ್ತಿಯಲ್ಲಿನ ಬೇರೆ ಗ್ರಾಮ ಪಂಚಾಯತಿಯ ಅಭ್ಯರ್ಥಿಯಗಳನ್ನು ಆಯ್ಕೆಗೆ ಪರಿಗಣಿಸುವುದು.

4. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಯಾವುದೇ ಮಾನಸಿಕ ನ್ಯೂನತೆಯಿಂದ ಮುಕ್ತರಾಗಿರತಕ್ಕದ್ದು.
5. ನೈತಿಕ ದುರ್ನಡತೆಯಿಂದಾಗಿ ನೀತಿಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೆ ಒಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ/ಕೇಂದ್ರ/ಸ್ಥಳೀಯ ಸಂಸ್ಥೆ ಕಚೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನುಬಾಹಿರ, ನೀತಿಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದುಹಾಕಿದ್ದಲ್ಲಿ ಅಥವಾ ವಜಾ ಮಾಡಲ್ಪಟ್ಟಿದ್ದು ಕಂಡು ಬಂದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.

6. ಅರ್ಜಿ ಸಲ್ಲಿಸುವಾಗ ಸುಳ್ಳು ಮಾಹಿತಿ/ದಾಖಲೆ ನೀಡಿ ಉದ್ಯೋಗ ಪಡೆದುಕೊಳ್ಳುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.

7. ಅಭ್ಯರ್ಥಿಯ ಅರ್ಹತೆಯ ವಿಷಯದಲ್ಲಿ ಸಿಬ್ಬಂದಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.

8. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ.

9. ಆಯ್ಕೆ ಸಂಬಂಧವಾಗಿ ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರಕ್ಕೆ ಆಸ್ಪದ ಇರುವುದಿಲ್ಲ.

10. ಈ ಅಧಿಸೂಚನೆಯನ್ನು ಯಾವುದೇ ಕಾರಣವನ್ನು ನೀಡದೆ ಯಾವುದೇ ಸಮಯದಲ್ಲಿ ರದ್ದುಗೊಳಿಸುವ ಅಧಿಕಾರವು ಸಿಬ್ಬಂದಿ ಆಯ್ಕೆ ಪ್ರಾಧಿಕಾರಕ್ಕೆ ಇರುತ್ತದೆ.

11. ನಿಗದಿಪಡಿಸಿದ ದಿನಾಂಕದಂದು ದಾಖಲೆಗಳ ಪರಿಶೀಲನೆಗೆ ಹಾಜರಾಗುವ ದಿನ ಮೂಲ ದಾಖಲೆಗಳನ್ನು ಹಾಗೂ ಮೂಲ ಅಂಕಪಟ್ಟಿಗಳನ್ನು ಪರಿಶೀಲಿಸಲಾಗುವುದು. ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸುವ ಮುಂಚಿತವಾಗಿ ಮೂಲ ಅಂಕಪಟ್ಟಿಯನ್ನು ಅರ್ಹ ಅಭ್ಯರ್ಥಿಗಳಿಂದ ಪಡೆಯಲಾಗುವುದು. ನಂತರ ಸಂಬಂಧಿಸಿದ ಇಲಾಖೆಗೆ ಕಳುಹಿಸಿ ಅಂಕಪಟ್ಟಿಯ ನೈಜತೆ ಬಗ್ಗೆ ಪರಿಶೀಲನೆ ನಡೆಸಲಾಗುವುದು.

**ವಿಶೇಷ ಸೂಚನೆ**: ಸದರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಈ ಮೇಲಿನ ನಿಗದಿತ ಶೈಕ್ಷಣಿಕ ವಿದ್ಯಾರ್ಹತೆಯ ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.

## 11) <u>ವಯೋಮಿತಿ:-</u>

ಅರ್ಜಿಸಲ್ಲಿಸಲುನಿಗದಿಪಡಿಸಿದಕೊನೆಯದಿನಾಂಕದಂದುಈ ಕೆಳಕಂಡ ಕೋಷ್ಟಕದಲ್ಲಿರುವ ಆಯಾ ಹುದ್ದೆಗಳ ಮುಂದೆ ನಮೂದಿಸಿರುವ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

| | |
|---|---|
| ಕನಿಷ್ಠವಯೋಮಿತಿ | 18 ವರ್ಷಗಳು |
| ಸಾಮಾನ್ಯಅರ್ಹತೆಅಭ್ಯರ್ಥಿಗಳಿಗೆಗರಿಷ್ಠ | ಗರಿಷ್ಠ 35 ವರ್ಷಗಳು |
| ಪ್ರವರ್ಗ2(ಎ), 2(ಬಿ), 3(ಎ), 3(ಬಿ) ಗೆಸೇರಿದಅಭ್ಯರ್ಥಿಗಳಿಗೆ | ಗರಿಷ್ಠ 38 ವರ್ಷಗಳು |
| ಪರಿಶಿಷ್ಟಜಾತಿ, ಪರಿಶಿಷ್ಟಪಂಗಡ, ಪ್ರವರ್ಗ-1 ರಅಭ್ಯರ್ಥಿಗಳಿಗೆ | ಗರಿಷ್ಠ 40 ವರ್ಷಗಳು |

**<u>ವಯೋಮಿತಿ ಸಡಿಲಿಕೆ:</u>**

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯನೇಮಕಾತಿ) ನಿಯಮ 1977ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

| | | |
|---|---|---|
| 1 | ಮಾಜಿಸೈನಿಕನಾಗಿದ್ದಲ್ಲಿ | ಸೇವೆಸಲ್ಲಿರುವಷ್ಟುವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು |
| 2 | ವಿಶೇಷ ಚೇತನ ಅಭ್ಯರ್ಥಿಗಳಿಗೆ | 10 ವರ್ಷಗಳು |
| 3 | ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣಪತ್ರ) | 10 ವರ್ಷಗಳು |

## 12) ಮೀಸಲಾತಿ ಪ್ರಮಾಣ ಪತ್ರಗಳು:

<table>
<tr>
<td>(1) ಜಾತಿ/ಮೀಸಲಾತಿ ಪ್ರಮಾಣಪತ್ರಗಳು</td>
<td>ಮೀಸಲಾತಿಪ್ರಮಾಣಪತ್ರಗಳನ್ನುಸಲ್ಲಿಸಬೇಕಾದನಮೂನೆಗಳು:
<table>
<tr><td>ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು</td><td>ನಮೂನೆ -ಡಿ</td></tr>
<tr><td>ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು</td><td>ನಮೂನೆ-ಇ</td></tr>
<tr><td>ಪ್ರವರ್ಗ-2ಎ, 2ಬಿ, 3ಎಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು</td><td>ನಮೂನೆ-ಎಫ್</td></tr>
</table>
ಹಿಂದುಳಿದ ವರ್ಗಗಳ ಪ್ರವರ್ಗ-2(ಎ), ಪ್ರವರ್ಗ-2(ಬಿ), ಪ್ರವರ್ಗ-3(ಎ) ಮತ್ತು ಪ್ರವರ್ಗ-3(ಬಿ) ಮೀಸಲಾತಿ ಪ್ರಮಾಣ ಪತ್ರಗಳು 05 ವರ್ಷಚಾಲ್ತಿಯಲ್ಲಿರುತ್ತವೆ (Government Notification No SWD 155 BCA 2012 dt: 17.02.2012ರನ್ವಯ) ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು. ಪ.ಜಾತಿ/ಪ.ಪಂಗಡ/ಪ್ರ.ವರ್ಗ-1ರಅಭ್ಯರ್ಥಿಗಳು ಪಡೆದಿರುವ/ ಪಡೆಯುವ ಪ್ರಮಾಣ ಪತ್ರಗಳು ಜೀವಿತ ಅವಧಿಯವರೆಗೆ ಅಥವಾರದ್ದು ಮಾಡುವವರೆಗೆ ಸಿಂಧುತ್ವವನ್ನು ಹೊಂದಿದ್ದು, ಇಂತಹ ಪ್ರಮಾಣ ಪತ್ರಗಳನ್ನು ದಿನಾಂಕದಮಿತಿಯಿಲ್ಲದೇ ಪರಿಗಣಿಸಲಾಗುವುದು (ಸರ್ಕಾರದಸುತ್ತೋಲೆಸಂಖ್ಯೆ: SWD 155 BCA 2011 Dt:22.02.2012)</td>
</tr>
<tr>
<td>(2) ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಾತಿ</td>
<td>ಸರ್ಕಾರಿ ಆದೇಶಸಂಖ್ಯೆ: ಸಿಆಸುಇ 08 ಸೇನೆನಿ 2001 ದಿನಾಂಕ: 13.02.2001 ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು.<br><br>ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ ಮಾಡುವ ಅಭ್ಯರ್ಥಿಗಳು ನಮೂನೆ-2ನ್ನು ಸಂಬಂಧಪಟ್ಟ ಕ್ಷೇತ್ರಶಿಕ್ಷಣಾಧಿಕಾರಿಯವರ ಮೇಲುರುಜುವಿನೊಂದಿಗೆ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವಾಗ ಅಪ್ಲೋಡ ಮಾಡತಕ್ಕದ್ದು.<br><br>ಜಾತಿ ಹಾಗೂ ಗ್ರಾಮೀಣ ಮೀಸಲಾತಿ ಕೋರಿರುವ ಅಭ್ಯರ್ಥಿಗಳ ಜಾತಿಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತವಾದಲ್ಲಿ, ಅಂತಹವರು ಆ ಪ್ರವರ್ಗದಡಿ ಗ್ರಾಮೀಣ ಮೀಸಲಾತಿಗೂ ಸಹ ಅನರ್ಹರಾಗುತ್ತಾರೆ.</td>
</tr>
<tr>
<td>(3) ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಮೀಸಲಾತಿ</td>
<td>ಸರ್ಕಾರಿ ಅಧಿಸೂಚನೆ ಸಂಖ್ಯೆ 71 ಸೇನೆನಿ 2001 ದಿ: 24.10.2002 ರನ್ವಯ ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇತರಗತಿಯ ವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ, ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು.</td>
</tr>
<tr>
<td>(4) ಮಾಜಿ ಸೈನಿಕರಿಗೆ ಮೀಸಲಾತಿ</td>
<td>ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಈ ಸಂಬಂಧ ಪ್ರಮಾಣ ಪತ್ರಗಳನ್ನುಅರ್ಜಿಸಲ್ಲಿಸುವ ಸಮಯದಲ್ಲಿ ಅಪ್‌ಲೋಡ್ ಮಾಡತಕ್ಕದ್ದು</td>
</tr>
</table>

| | |
|---|---|
| (5) ವಿಶೇಷ ಚೇತನ ಅಭ್ಯರ್ಥಿ | ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್149 ಎಸ್ಆರ್ಆರ್ 2020 ದಿನಾಂಕ:25.09.2020ರಲ್ಲಿ ನೇಮಕಾತಿ ಸಂದರ್ಭದಲ್ಲಿ ಶೇ.5ರಷ್ಟು ವಿಶೇಷ ಚೇತನರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ವಿಶೇಷ ಚೇತನವುಳ್ಳ ಅಭ್ಯರ್ಥಿಗಳು ಮತ್ತು ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ/115/ಸನೆನಿ/2005 ದಿನಾಂಕ:19.11.2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ವಿಶೇಷ ಚೇತನರ ಬಗ್ಗೆ, ಸರ್ಕಾರದ ಆದೇಶ ಸಂ:ಮಮಇ 65/ಪಿಹೆಚ್‌ಪಿ 2010 ದಿ:18.02.2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ ತಾಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ/ಜಿಲ್ಲಾಮಟ್ಟದ ವೈದ್ಯಕೀಯ ಪ್ರಾಧಿಕಾರ/ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು ಅರ್ಜಿಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಇತರೆ ಯಾವುದೇ ನಮೂನೆಯಲ್ಲಿ ವಿಶೇಷ ಚೇತನರ ಬಗ್ಗೆ, ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು/ ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ. |

## 13) ವಿಶೇಷ ಸೂಚನೆಗಳು:

"ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ" ಹುದ್ದೆಗಳಿಗೆ ಆನ್‌ಲೈನ್ ಅರ್ಜಿಯೊಂದಿಗೆ ಸಲ್ಲಿಸುವ ಲಗತ್ತುಗಳ ಆಧಾರದ ಮೇಲೆ ಮಾತ್ರವೇ ದಾಖಲೆಗಳ ಪರಿಶೀಲನೆ ಮಾಡಲಾಗುವುದು. ಏನೇ ಸಂದರ್ಭವಿದ್ದರೂ ವಯೋಮಿತಿ, ವಿದ್ಯಾರ್ಹತೆ ಮತ್ತು ಮೀಸಲಾತಿಗಳಿಗೆ ಸಂಬಂಧಿಸಿದಂತೆ ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಂದರ್ಭದಲ್ಲಿ ಅಪ್‌ಲೋಡ ಮಾಡಲಾದ ಪ್ರಮಾಣ ಪತ್ರಗಳನ್ನೇ ಅಂತಿಮವೆಂದು ತೀರ್ಮಾನಿಸಲಾಗುತ್ತದೆ. ಆದ್ದರಿಂದ ಅಭ್ಯರ್ಥಿಗಳು ಜಾಗರೂಕತೆಯಿಂದ ತಮಗೆ ಅನ್ವಯಿಸುವ ಎಲ್ಲಾ ದಾಖಲೆಗಳ ಮೂಲ ಪ್ರತಿಗಳನ್ನು ಸ್ಪಷ್ಟವಾಗಿ ಗೋಚರಿಸುವ ರೀತಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು.

| |
|---|
| **ಆದ್ದರಿಂದ ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಅಪ್ಲೋಡ ಮಾಡಬೇಕು ತಪ್ಪಿದ್ದಲ್ಲಿ ಅವರ ಮೀಸಲಾತಿ/ಅಭ್ಯರ್ಥಿತ್ವವನ್ನು ಪರಿಗಣಿಸಲಾಗುವುದಿಲ್ಲ.** |
| (1) ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರುವ ಬಗ್ಗೆ, ಅಂಕಪಟ್ಟಿಗಳನ್ನು ಅಪ್‌ಲೋಡ ಮಾಡುವುದು ಕಡ್ಡಾಯವಾಗಿರುತ್ತದೆ.<br>(2) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ.<br>(3) ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿಹೊಂದಿದ ಬಗ್ಗಿನ ಪ್ರಮಾಣಪತ್ರ (ಪೂರ್ಣವಾಗಿ) (Discharge Certificate) ಮತ್ತು ಪೆನ್ಷನ್ನು ಪಡೆಯುತ್ತಿರುವ ದಾಖಲೆಯ ಪ್ರತಿ/ಮಾಜಿಸೈನಿಕರ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ಬಗ್ಗೆ, ಪ್ರಮಾಣಪತ್ರ (Dependent certificate) (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ).<br>(4) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ನಲ್ಲಿ ತಹಶೀಲ್ದಾರ್ ರಿಂದ ಪಡೆದ ಪ್ರಮಾಣಪತ್ರ (ಮೀಸಲಾತಿಕೋರಿದ್ದಲ್ಲಿ)<br>(5) ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-2ರಲ್ಲಿ (ಮೀಸಲಾತಿಕೋರಿದ್ದಲ್ಲಿ).<br>(6) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣಪತ್ರ (ಮೀಸಲಾತಿಕೋರಿದ್ದಲ್ಲಿ).<br>(7) ಅಂಗವಿಕಲ ಮೀಸಲಾತಿ ಪ್ರಮಾಣಪತ್ರ (ಮೀಸಲಾತಿಕೋರಿದ್ದಲ್ಲಿ).<br>(8) ವಯೋಮಿತಿ ಸಡಿಲಿಕೆ ಕೋರುವ ಸರ್ಕಾರಿ ನೌಕರರು ನಿಯಮಗಳಲ್ಲಿರುವಂತೆ ಸೇವೆಸಲ್ಲಿಸಿರುವ ನೇಮಕಾತಿ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ<br>(9) ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ ಪ್ರಮಾಣ ಪತ್ರ (ಮೀಸಲಾತಿಕೋರಿದ್ದಲ್ಲಿ).<br>(10) ತೃತೀಯ ಲಿಂಗದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರ(ಮೀಸಲಾತಿಕೋರಿದ್ದಲ್ಲಿ). |

ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆಯ ಪ್ರಮಾಣ ಪತ್ರ, ವಯೋಮಿತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರ ಹಾಗೂ ಮೇಲ್ಕಂಡ ಮೀಸಲಾತಿಗಳನ್ನು ಕೋರುವ ಎಲ್ಲಾ ಅಭ್ಯರ್ಥಿಗಳು ಸಂಬಂಧಿತ ಪ್ರಮಾಣ ಪತ್ರಗಳನ್ನು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ **ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಕಡ್ಡಾಯವಾಗಿ ಅಪ್‌ಲೋಡ ಮಾಡತಕ್ಕದ್ದು.**

1) ಅಭ್ಯರ್ಥಿಗಳು ತಮಗೆ ಅನ್ವಯಿಸುವ ಮೀಸಲಾತಿಗಳನ್ನು ಆನ್‌ಲೈನ್ ಅರ್ಜಿಸಲ್ಲಿಸುವ ಸಮಯದಲ್ಲೇ ಕೋರತಕ್ಕದ್ದು (Claim) ಹಾಗೂ ಈ ಸಂಬಂಧ ಸದರಿ ಪ್ರಮಾಣ ಪತ್ರಗಳನ್ನು ತಪ್ಪದೇ ಅಪ್‌ಲೋಡ್ ಮಾಡತಕ್ಕದ್ದು. ಈ ಎರಡೂ ಪ್ರಕ್ರಿಯೆಗಳು ಕಡ್ಡಾಯವಾಗಿದ್ದು, ತಪ್ಪಿದ್ದಲ್ಲಿ ಅಂತಹ ಮೀಸಲಾತಿಯನ್ನು ತಿರಸ್ಕರಿಸಲಾಗುವುದು. ಈ ಸಂಬಂಧ ತದನಂತರ ಸಲ್ಲಿಸುವ ಯಾವುದೇ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

2) ಫೋಟೋ ಮತ್ತು ಸಹಿಯನ್ನು/ ದಾಖಲೆಗಳನ್ನು ಅಪ್‌ಲೋಡ್ ಮಾಡದೇ ಇರುವ ಅಪೂರ್ಣವಾಗಿರುವ ದಾಖಲೆಗಳನ್ನು ಅಪ್‌ಲೋಡ್ ಮಾಡಿರುವ ಹಾಗೂ ಶುಲ್ಕ ಸಂದಾಯ ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

3) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ. ಜಿಲ್ಲಾ ಪಂಚಾಯತಿಯಿಂದ ಯಾವುದೇ ಕಾರಣಕ್ಕೂ ಅರ್ಜಿಯ ಪ್ರತಿಯನ್ನು ಒದಗಿಸಲಾಗುವುದಿಲ್ಲ.

4) ಹುದ್ದೆಗಳಿಗೆ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ, ಇತ್ಯಾದಿಗಳಿಗನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ತಪ್ಪು ಮಾಹಿತಿ ನೀಡಿದಲ್ಲಿ ಅಂತಹ ಅಭ್ಯರ್ಥಿಗಳನ್ನು ಪರಿಗಣಿಸುವುದಿಲ್ಲ.

## 14) ಜಿಲ್ಲಾ ಪಂಚಾಯತಿಯೊಂದಿಗೆ ಪತ್ರ ವ್ಯವಹಾರ:

ಜಿಲ್ಲಾ ಪಂಚಾಯತಿಯು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ವಿಳಾಸ ಬದಲಾವಣೆ ಇದ್ದಲ್ಲಿ ಅಭ್ಯರ್ಥಿಗಳು ಲಿಖಿತ ಮನವಿಯ ಮೂಲಕ ಜಿಲ್ಲಾ ಪಂಚಾಯತಿಯ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಜಿಲ್ಲಾ ಪಂಚಾಯತಿಯು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಜಿಲ್ಲಾ ಪಂಚಾಯತಿಯು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರವಹಿಸತಕ್ಕದ್ದು. ಅಭ್ಯರ್ಥಿಗಳು ಜಿಲ್ಲಾ ಪಂಚಾಯತಿಯೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯಲ್ಲಿ ಕೆಳಕಂಡ ಮಾಹಿತಿಗಳನ್ನು ಒದಗಿಸತಕ್ಕದು.

(i) ಹುದ್ದೆಯ/ವಿಷಯದ ಹೆಸರು/ನೋಂದಣಿಸಂಖ್ಯೆ
(ii) ಅಭ್ಯರ್ಥಿಯ ಪೂರ್ಣ ಹೆಸರು ಹಾಗೂ ಇ-ಮೇಲ್ ಐಡಿ
(iii) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

## 15) ದುರ್ನಡತೆ:

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಆವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ಅವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ: ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

16) ಸರ್ಕಾರದ ಅಧಿಸೂಚನೆ ಸಂಖ್ಯೆ: RDPR/156/GPA/2022(ಇ) ದಿನಾಂಕ: 14-11-2022ರ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಸೇವಾ) ನಿಯಮಗಳು, 2022ರ ನಿಯಮದಲ್ಲಿ ಉಲ್ಲೇಖಿಸಿರುವ ಪ್ರಕಾರ ರಾಜ್ಯ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿರುವ ಮಾರ್ಗಸೂಚಿಗಳಿಗನುಸಾರ ನೇರನೇಮಕಾತಿ ಕೋಟಾದ ಮೀಸಲಾತಿ ನೀತಿಯನ್ನು ಅನುಸರಿಸಿ ಆಯ್ಕೆ ಮಾಡಲು ಸೂಚಿಸಿರುವುದರಿಂದ ಇದರಂತೆ ಹಾಗೂ ಎಲ್ಲಾ ನಿಯಮಾವಳಿಗಳನ್ನು ಅನುಸರಿಸಿ ಗ್ರಾಮ ಪಂಚಾಯತಿಯಲ್ಲಿ ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿ ಮಾಡಲಾಗುತ್ತದೆ.

17) ಸದರಿ ನೇಮಕಾತಿಗೆ ಅರ್ಜಿ ಸಲ್ಲಿಸಲು ಕೇವಲ ಆನ್ ಲೈನ್ ಮೂಲಕ ಮಾತ್ರವೇ ಅವಕಾಶ ಕಲ್ಪಿಸಿದ್ದು, ಖುದ್ದಾಗಿ ಅಥವಾ ಅಂಚೆ ಮೂಲಕ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.

18) ಅಭ್ಯರ್ಥಿಯು ಅರ್ಜಿ ಶುಲ್ಕವನ್ನು ಪಾವತಿ ಮಾಡದಿದ್ದಲ್ಲಿ, ಸದ್ರಿ ಅಭ್ಯರ್ಥಿಯ ಅರ್ಜಿಯನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

19) ಜಾತಿ ಮೀಸಲಾತಿಯಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರದಿಂದ ಮರು ಪರಿಶೀಲಿಸಿದ ನಂತರ ಆದೇಶ ನೀಡಲಾಗುವುದು ಹಾಗೂ ಮೀಸಲಾತಿ ಕೋರುವ ಅಭ್ಯರ್ಥಿಗಳು ಆಯಾ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರದ ಕುರಿತು ಮರು ಪರಿಶೀಲನೆ ಅಗತ್ಯವಿದ್ದಲ್ಲಿ ಸಕ್ಷಮ ಪ್ರಾಧಿಕಾರದಿಂದ ನೈಜತೆ ಬಗ್ಗೆ ಪರಿಶೀಲನೆ ನಡೆಸಲಾಗುವುದು. ಅಭ್ಯರ್ಥಿಗಳು ಮೂಲ ಪ್ರಮಾಣ ಪತ್ರಗಳನ್ನು ಮಾತ್ರವೇ ಆನ್ ಲೈನಿನಲ್ಲಿ ಅಪ್ಲೋಡ್ ಮಾಡತಕ್ಕದ್ದು.

20) ಸದರಿ ಹುದ್ದೆಗಳಿಗೆ ನೇಮಕಗೊಳ್ಳುವವರು ಗ್ರಾಮ ಪಂಚಾಯತಿಯ ನೌಕರರಾಗಿರುತ್ತಾರೆ ವಿನಃ ಸರಕಾರಿ ನೌಕರರಾಗಿರುವುದಿಲ್ಲ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 311 ಮತ್ತು 316 ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: RDPR/156/GPA/2022(ಇ) ದಿನಾಂಕ: 14-11-2022ರ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಸೇವಾ ) ನಿಯಮಗಳು, 2022ರ ನಿಯಮಗಳು ಸದ್ರಿ ನೌಕರರಿಗೆ ಅನ್ವಯಿಸುತ್ತದೆ.

21) <u>**ಅರ್ಜಿ ಸಲ್ಲಿಸಬೇಕಾದ ವಿಳಾಸ:**</u>ವೆಬ್ ಸೈಟ್: https://**bagalkot.nic.in**/ ನಲ್ಲಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವುದು.

22) <u>**ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:-**</u>

ಜಿಲ್ಲಾ ಪಂಚಾಯತಿಯ ಆಡಳಿತಶಾಖೆ : 08354-235576

**ಅಧ್ಯಕ್ಷರು,**
**ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ**
**ಕೇಂದ್ರದ ಮೇಲ್ವಿಚಾರಕರ ಆಯ್ಕೆ ಸಮಿತಿ ಹಾಗೂ**
**ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,**
**ಜಿಲ್ಲಾ ಪಂಚಾಯತ್, ಬಾಗಲಕೋಟೆ**

<u>**ಪ್ರತಿ:**</u>

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
2) ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕಲ್ಲುಕಟ್ಟಡ, ಕಾಳಿದಾಸ ರಸ್ತೆ, ಕೆ.ಜಿ.ರೋಡ್ ಜಂಕ್ಷನ್, ಗಾಂಧಿನಗರ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
3) ಡಿ.ಐ.ಓ., ರಾಷ್ಟ್ರೀಯ ಸೂಚನಾ ವಿಜ್ಞಾನ ಕೇಂದ್ರ, ಜಿಲ್ಲಾ ಪಂಚಾಯತ್, ಬಾಗಲಕೋಟೆ ಇವರಿಗೆ ಸೂಕ್ತ ಕ್ರಮಕ್ಕಾಗಿ.
4) ಜಿಲ್ಲಾ ಯೋಜನಾ ವ್ಯವಸ್ಥಾಪಕರು, ಜಿಲ್ಲಾ ಪಂಚಾಯತ್, ಬಾಗಲಕೋಟೆ ಇವರಿಗೆ ಜಿಲ್ಲಾ ಪಂಚಾಯತ್ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
5) ಜಿಲ್ಲೆಯ ಎಲ್ಲಾ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಬಾಗಲಕೋಟೆ ಜಿಲ್ಲೆ ಇವರಿಗೆ ಸೂಕ್ತ ಕ್ರಮಕ್ಕಾಗಿ.
6) ಜಿಲ್ಲೆಯ ಜಿಲ್ಲಾ, ಗ್ರಾಮ ಪಂಚಾಯತ್ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ – ಸಂಬಂಧಪಟ್ಟ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು **ಅಧಿಸೂಚನೆಯನ್ನು** ಗ್ರಾಮ ಪಂಚಾಯತ್ ಸೂಚನಾ ಫಲಕದಲ್ಲಿ ಪ್ರಕಟಿಸುವುದು ಹಾಗೂ ಗ್ರಾಮ ಪಂಚಾಯತ್ ಚುನಾಯಿತ ಪ್ರತಿನಿಧಿಗಳ ಗಮನಕ್ಕೆ ತಂದು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ವ್ಯಾಪಕ ಪ್ರಚಾರಪಡಿಸುವುದು.

# ನಮೂನೆಗಳು

(ಪ.ಜಾ / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ - ಡಿ

(ನಿಯಮ 3ಎ (2) (3) ನೋಡಿ)ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

.................................................... ರಾಜ್ಯದ / ಕೇಂದ್ರಾಡಳಿತ ಪ್ರದೇಶದ * .............................. ಜಿಲ್ಲೆಯ / ವಿಭಾಗದ .................................................... ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ .............................. ಇವರ ಮಗ / ಮಗಳಾದ ಶ್ರೀ / ಶ್ರೀಮತಿ .............................. ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿದ್ದಾರೆಂದು ಪ್ರಮಾಣೀಕರಿಸಿದೆ.

* ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲಕ ತಿದ್ದುಪಡಿಯಾದಂತೆ)

* ಸಂವಿಧಾನ
* ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
* ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
* ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
* ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
* ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988
* ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * .................................................... ಮತ್ತು / ಅಥವಾ ಅವನ* / ಅವಳ* ಕುಟುಂಬವು .................................................... ರಾಜ್ಯ / ಕೇಂದ್ರಾಡಳಿತ ಪ್ರದೇಶದ .................................................... ಜಿಲ್ಲೆ / ವಿಭಾಗದ ....................................... ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ.............................................

ತಹಶೀಲ್ದಾರ್.............................................

ಪದನಾಮ

ಸ್ಥಳ :

ದಿನಾಂಕ:

ಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ *

* ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

ಸೂಚನೆ: ಇಲ್ಲಿ ಉಪಯೋಗಿಸಿದ 'ಸಾಮಾನ್ಯ ನಿವಾಸಿಗಳು' ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.ಭಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/76-ಎಸ್‌ಸಿಟಿ-1 ಗೃಹ ಮಂತ್ರಾಲಯ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದರಿಂದಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13-2-74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೆನ್ನುವುದಾಗಿ ತಕ್ಕದ್ದು, ಅವರ ರೀತಿಯನ್ನು ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

(ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ - ಇ

(ನಿಯಮ 3ಎ (2) (3) ನೋಡಿ)

ಹಿಂದುಳಿದ ವರ್ಗಗಳ (ಪ್ರವರ್ಗ-1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ ........................................

........................................................................ ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀಮತಿ........................

........................................ ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ

........................................................ ಇವರು ಹಿಂದುಳಿದ ವರ್ಗಗಳ (ಪ್ರವರ್ಗ)

........................................................................ ಉಪ ಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

........................................ ಜಾತಿಯ ........................................

ತಹಶೀಲ್ದಾರ್

ಸ್ಥಳ : ........................................ ತಾಲ್ಲೂಕು

ದಿನಾಂಕ : ಅಧಿಕಾರಿಯ ಮೊಹರು

ಪ್ರವರ್ಗ - 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ - ಎಫ್

(ನಿಯಮ 3ಎ (2) (3)ನ್ನು ನೋಡಿ)

ಹಿಂದುಳಿದ ವರ್ಗಗಳ (2ಎ, 2ಬಿ, 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ

ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ

........................................ ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ

........................................................ ಇವರು ಮತ್ತು ಅವನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ

........................................................ ಆದೇಶ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002 ರಲ್ಲಿ ನಿರ್ದಿಷ್ಟಪಡಿಸಿದ ಮೇಲ್ಪದರದ (ಕ್ರೀಮೀಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು;

ಅಭ್ಯರ್ಥಿಯಾಗಲಿ ಅಥವಾ ಅವನ / ಅವಳ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1 ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

ಅಥವಾ

ಸಾರ್ವಜನಿಕ ವಲಯದ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ. 43100-83900/-) ಕಡಿಮೆಯಿಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

ಅಥವಾ

ಅವನ /ಅವಳ ತಂದೆ ತಾಯಿ/ ಪೋಷಕರು /ಪತ್ನಿ /ಪತಿಯ ಆದಾಯವು 8 ಲಕ್ಷ ರೂಪಾಯಿಗಳಿಗಿಂತ ಮೀರುವುದಿಲ್ಲವೆಂದು (ಸರ್ಕಾರದ ಆದೇಶ ಸಂಖ್ಯೆ: ಹಿಂವಕ 304 ಬಿಸಿಎ 2017 ಬೆಂಗಳೂರು, ದಿ: 14-09-2018);ಅಥವಾ ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಅವನ / ಅವಳ ತಂದೆ ತಾಯಿ/ ಪೋಷಕರು / ಪತ್ನಿ / ಪತಿಯು ಮಾರಾಟ ತೆರಿಗೆದಾರರಲ್ಲ ಅಥವಾ ಅವನ / ಅವಳ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರೆಲ್ಲರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 20 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

........................................ ಜಾತಿಗೆ

........................................ ಇವರು ........................................

ಶ್ರೀ/ಶ್ರೀಮತಿ/ಕುಮಾರಿ........................................ ಸೇರಿದ ಉಪ ಜಾತಿಯವರಾಗಿದ್ದು, ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ

........................................ (2ಎ, 2ಬಿ, 3ಎ, 3ಬಿ) ಕ್ಕೆ

225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ ........................................ ಮಾತ್ರ) ಎಂದು ಪ್ರಮಾಣೀಕರಿಸಲಾಗಿದೆ.

ಸೇರಿರುತ್ತಾರೆ ಮತ್ತು ಈ ಕುಟುಂಬದ ವಾರ್ಷಿಕ ಆದಾಯವು ರೂ.:(ರೂ:

ತಹಶೀಲ್ದಾರ್

ಸ್ಥಳ : ........................................ ತಾಲ್ಲೂಕು

ದಿನಾಂಕ: ಅಧಿಕಾರಿಯ ಮೊಹರು

<u>ನಮೂನೆ – 2</u>

## ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ........................................ರವರ ಮಗ/ ಮಗಳು/ ಪತಿ/ ಪತ್ನಿ/ಶ್ರೀ/ಶ್ರೀಮತಿ/ಕುಮಾರಿ........................................ ಜಿಲ್ಲೆ ........................ ಗ್ರಾಮದಲ್ಲಿ ........................ ತಾಲ್ಲೂಕಿನ........................ ವಾಸವಾಗಿರುವ ಇವರು ಒಂದನೇ ತರಗತಿಯಿಂದ ........................ ತರಗತಿಯವರೆಗೆ ........................ ತಾಲ್ಲೂಕು........................ ಜಿಲ್ಲೆ ........................ ವರ್ಷ ನಡೆದ ಪರೀಕ್ಷೆಯಲ್ಲಿ ಪಟ್ಟಣ........................ ಶಾಲೆಯಲ್ಲಿ ವ್ಯಾಸಂಗ ಮಾಡಿ ........................ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿದ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಸಹಿ

ಮೇಲು ರುಜು<br>ಕ್ಷೇತ್ರ ಶಿಕ್ಷಣ ಅಧಿಕಾರಿ<br>ಕಛೇರಿಯ ಮೊಹರು

ಮುಖ್ಯೋಪಾಧ್ಯಾಯರ ಸಹಿ<br>ಮತ್ತು ಸಂಸ್ಥೆಯ ಮೊಹರು

ಸ್ಥಳ :

ದಿನಾಂಕ :

## ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ/ಶ್ರೀಮತಿ........................................ರವರ ಮಗ/ಮಗಳು/ಪತಿ/ಪತ್ನಿ/ಶ್ರೀಮತಿ/ಕುಮಾರಿ ........................................ ಜಿಲ್ಲೆ ........................................ಗ್ರಾಮದಲ್ಲಿ ........................ತಾಲ್ಲೂಕಿನ ........................................ ವಾಸವಾಗಿರುವ ಇವರು ........................ನೇ ತರಗತಿಯಿಂದ ........................ನೇ ತರಗತಿಯವರೆಗೆ ........................ ಶೈಕ್ಷಣಿಕ ವರ್ಷದಿಂದ ........................ ಶೈಕ್ಷಣಿಕ ವರ್ಷದವರೆಗೆ ........................ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:

ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು

ದಿನಾಂಕ:

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ: 19.11.2005

## CERTIFICATE FOR THE PERSONS WITH DISABILITIES

This is to certify that Sri / Smt / Kum .................................................... son/ wife / daughter of Shri ............................................................Age ........................... old, male / female. Registration No ........................... is a case of ........................... He / She is physically disabled/visual disabled/speech & hearing disabled and has ........................... % (......................percent) permanent (physical impairment visual impairment speech & hearing impairment) in relation to his / her ...........................................

Note :

1. This condition is progressive/non-progressive/likely to improve/not likely to improve. *
2. Re-assessment is not recommended/is recommended after a period of ..................... months/years. *

* Strike out which is not applicable

(Recent Attested Photograph showing the disability affixed here)

Sd/-
(Doctor)
(Seal)

Sd/-
(Doctor)
(Seal)

Sd/-
(Doctor)
(Seal)

Countersigned by the
Medical Superintendent CMO/Head
of Hospital (with seal)

Signature / Thumb impression
of the disabled person

Explanation:-As per Notification No. DPAR 50 SRR 2000 dated 03-09-2005 " Physically Handicapped candidates " or " person with disability " means a person suffering from not less than forty percent of any of the following disabilities :- (1) Blindness (2) Low Vision (3) Hearing impairment (4) Locomotor disability (5) Leprosy cured (6) Mental retardation (7) Mental illness.

(1)Blindness refers to a condition where a person suffers from any of the following conditions, namely:- (a)Total absence of sight; or (b) Visual acuity not exceeding 6/60 or 20/200 (Snellen) in the better eye with correcting lenses; or (c) limitation of the field of vision subtending an angle of 20 degree or worse;(2) Person with low vision means a person with impairment of visual functioning even after treatment or standard refractive correction, but who uses or is potentially capable of using vision for the planning or execution of a task with appropriate assistive device; (3) Hearing impairment means loss of sixty decibels or more in the better ear in the conversational range of frequencies.(4) Locomotor disability means disability of the bones, joints or muscles leading to substantial restriction of the movement of the limbs or any form of cerebral palsy.(5) Leprosy cured:-means any person who has been cured of Leprosy, but is suffering from, (i) Loss of sensation in hands or feet as well as loss of sensation & paresis in the eye & eyelid, but with no manifest deformity;(ii)manifest deformity & paresis but having sufficient mobility in their hands & feet to enable them to engage in normal economic activity; (iii) extreme physical deformity as well as advanced age which prevents him from undertaking any gainful occupation; and the expressesion " Leprosy cured " shall be construed accordingly; (6) Mental Retardation:- means a condition of arrested or incomplete development of mind of a person who is specially characterised by sub normality of intelligence; (7) Mental Illness:- means any mental disorder other than mental retardation.